21.03.2022 75

**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಡಾ. ಕೆ.ಗೋವಿಂದರಾಜು ರವರು ನಿಯಮ 330ರ ಅಡಿಯಲ್ಲಿ ನೀಡಿರುವ ಸೂಚನೆ ಸಂಖ್ಯೆ:75ಕ್ಕೆ ಉತ್ತರ.**

**ಪ್ರಶ್ನೆ:**

ಇತ್ತೀಚಿನ ದಿನಮಾನದಲ್ಲಿ ನಮ್ಮ ದೇಶದ ಕ್ರೀಡಾಪಟುಗಳು ಅಂತಾರಾಷ್ಟ್ರೀಯ ಮಟ್ಟದಲ್ಲಿ ಉತ್ತಮ ಸಾಧನೆ ಮಾಡುತ್ತಿದ್ದು ದೇಶದ ಕೀರ್ತಿ ಪತಾಕೆಯನ್ನು ಹಾರಿಸುತ್ತಿದ್ದಾರೆ. ಇತ್ತೀಚಿನ ಒಲಂಪಿಕ್ಸ್ ಕ್ರೀಡೆ ಪ್ಯಾರಾಲಿಂಪಿಕ್ಸ್ ಕ್ರೀಡಾಕೂಟಗಳಲ್ಲಿಯೂ ಸಹ ದೇಶದ ಕ್ರೀಡಾಪಟುಗಳ ಸಾಧನೆ ನಿಜಕ್ಕೂ ಮೆಚ್ಚುವಂತಹುದ್ದು. ಹತ್ತು ಹಲವು ಕ್ರೀಡಾ ದಾಖಲೆಗಳನ್ನು ಈ ಕ್ರೀಡಾಕೂಟಗಳಲ್ಲಿ ನಮ್ಮ ಕ್ರೀಡಾಪಟುಗಳು ನಿರ್ಮಿಸಿದ್ದು ದೇಶದ ಜನರು ಹೆಮ್ಮೆಯಿಂದ ಬೀಗುವಂತೆ ಮಾಡಿದ್ದಾರೆ. ಒಲಂಪಿಕ್ಸ್ ನಲ್ಲಿ ಪದಕ ವಿಜೇತ ಮತ್ತು ಉತ್ತಮ ಸಾಧನೆ ಮಾಡಿರುವ ಕ್ರೀಡಾಪಟುಗಳನ್ನು ಕೇಂದ್ರ ಸರ್ಕಾರ ಮತ್ತು ವಿವಿಧ ರಾಜ್ಯ ಸರ್ಕಾರಗಳೂ ಸಹ ಬಹುಮಾನಿಸಿರುವುದನ್ನು ನಾವೆಲ್ಲಾ ಗಮನಿಸಿದ್ದೇವೆ. ಆದರೆ, ಒಂದು ಬಹು ದೊಡ್ಡ ಜನಸಂಖ್ಯೆ ಹೊಂದಿರುವ ನಮ್ಮ ದೇಶಕ್ಕೆ ಪದಕ ಪಟ್ಟಿಯಲ್ಲಿನ ಸಂಖ್ಯೆ ಕಡಿಮೆ ಎಂಬುದು ನಿಜವಾದರು ಸರಿ, "Something is better than Nothing" ಎಂಬುದನ್ನು ಸಹ ಇಲ್ಲಿ ಅರಿಯಬೇಕು. ಅಂದರೆ, ನಮ್ಮಲ್ಲಿ ಪ್ರತಿಭಾನ್ವಿತ, ಸಮರ್ಥ ಕ್ರೀಡಾಪಟುಗಳಿಗೆ ಯಾವುದೇ ಕೊರತೆ ಇಲ್ಲ. ಅವರಿಗೆ ಒಂದೊಳ್ಳೆ ತರಬೇತಿ, ಉತ್ತೇಜನ, ದೊರಕಿದಲ್ಲಿ ಸಾಧನೆಯಲ್ಲಿ, ಪದಕ ಪಟ್ಟಿಯಲ್ಲಿ ಮತ್ತಷ್ಟು ಉಜ್ವಲವಾಗುವ ಎಲ್ಲಾ ಅವಕಾಶಗಳು ಖಂಡಿತ ಇವೆ. ಬಹುಮುಖ್ಯವಾಗಿ ಕ್ರೀಡಾಕ್ಷೇತ್ರಕ್ಕೆ, ಅವಶ್ಯವೆನಿಸುವ ಉತ್ತಮ ಮೂಲಭೂತ ಸೌಲಭ್ಯ, ಪ್ರತಿ ಆರ್ಥಿಕ ಬಜೆಟ್ ನಲ್ಲೂ ಹೆಚ್ಚಿನ ಅನುದಾನ ನೀಡಿಕೆ ಆಗಬೇಕು, ಕೇವಲ ಜಿಲ್ಲಾಮಟ್ಟಕ್ಕೆ ಸೀಮಿತಗೊಳಿಸದೇ ವಲಯವಾರು ಮಟ್ಟದಲ್ಲಿಯೂ ಹೆಚ್ಚಿನ ಅನುದಾನ ನೀಡಿ ಅಂತರಾಷ್ಟ್ರೀಯ ಗುಣಮಟ್ಟದ ಕ್ರೀಡಾ ಸೌಲಭ್ಯ, ತರಬೇತಿ, ಉತ್ತೇಜನ ದೊರಕಿದಲ್ಲಿ ಮತ್ತಷ್ಟು ಸಾಧನೆಯನ್ನು, ನಾವುಗಳು ನಿರೀಕ್ಷಿಸಬಹುದಾಗಿದೆ. ರಾಜ್ಯದ ಕ್ರೀಡಾ ಕ್ಷೇತ್ರದ ಸರ್ವತೋಮುಖ ಬೆಳವಣಿಗೆಗೆ ಮತ್ತಷ್ಟು ಹೆಚ್ಚಿನ ಅನುದಾನ, ಕಾಳಜಿ ಬೇಕಾಗಿದೆ. ಹೀಗಾಗಿ ಕ್ರೀಡೆ ಮತ್ತು ಕ್ರೀಡಾಪಟುಗಳ ಈ ಮಹತ್ವದ ವಿಷಯವನ್ನು ಸದನದಲ್ಲಿ ಪ್ರಸ್ತಾಪಿಸಲು ಅನುಮತಿ ಕೋರುತ್ತೇನೆ.

**ಉತ್ತರ:**

ಕರ್ನಾಟಕ ಸರ್ಕಾರವು ಪ್ರತಿಭಾವಂತ ಯುವ ಕ್ರೀಡಾಪಟುಗಳಿಗೆ ಉತ್ತೇಜನ ನೀಡಲು ಸಮಗ್ರ ಯೋಜನೆಯನ್ನು ರೂಪಿಸಿ, ಕಾರ್ಯನಿರ್ವಹಿಸುತ್ತಿದೆ. ಅಂತಾರಾಷ್ಟ್ರೀಯ ಗುಣಮಟ್ಟದ ಕ್ರೀಡಾ ಮೂಲಸೌಕರ್ಯಗಳ ಸೃಜನೆ, ಕ್ರೀಡಾ ವಿಜ್ಞಾನ ಆಧಾರಿತ ಕ್ರೀಡಾಪಟುಗಳ ಆಯ್ಕೆ ಪ್ರಕ್ರಿಯೆ, ಕ್ರೀಡಾ ವಸತಿ ನಿಲಯಗಳು, ಕ್ರೀಡಾ ಸ್ಪರ್ಧೆಗಳ ಆಯೋಜನೆ ಈ ನಿಟ್ಟಿನಲ್ಲಿ ಪ್ರಮುಖ ಅಂಶಗಳಾಗಿವೆ.

ರಾಜ್ಯದಾದ್ಯಂತ 29 ಜಿಲ್ಲಾ ಕ್ರೀಡಾಂಗಣಗಳು, 120 ತಾಲ್ಲೂಕು ಕ್ರೀಡಾಂಗಣಗಳು, 47 ಒಳಾಂಗಣ ಕ್ರೀಡಾಂಗಣಗಳು, 31 ಈಜುಕೊಳಗಳು, ಅಂತಾರಾಷ್ಟ್ರೀಯ ಗುಣಮಟ್ಟದ 15 ಸಿಂಥೆಟಿಕ್ ಅಥ್ಲೆಟಿಕ್ ಟ್ರ್ಯಾಕ್‌ಗಳು, 04 ಸಿಂಥೆಟಿಕ್ ಹಾಕಿ ಅಂಕಣಗಳು ಹಾಗೂ 01 ಸಿಂಥೆಟಿಕ್ ಫುಟ್ಬಾಲ್ ಅಂಕಣಗಳನ್ನು ನಿರ್ಮಿಸಲಾಗಿದೆ. ಬೆಂಗಳೂರಿನ ಶ್ರೀ ಕಂಠೀರವ ಒಳಾಂಗಣ ಕ್ರೀಡಾಂಗಣವನ್ನು ಅಂತಾರಾಷ್ಟ್ರೀಯ ಗುಣಮಟ್ಟದ ಸೌಲಭ್ಯಗಳೊಂದಿಗೆ ಸಜ್ಜುಗೊಳಿಸಲಾಗಿದ್ದು, ಈಗಾಗಲೇ ಅಖಿಲ ಭಾರತ ಬಾಸ್ಕೆಟ್‌ಬಾಲ್ ಸಂಸ್ಥೆಯ ಸಹಯೋಗದೊಂದಿಗೆ ಹಲವಾರು ಅಂತಾರಾಷ್ಟ್ರೀಯ ಬಾಸ್ಕೆಟ್‌ಬಾಲ್ ಪಂದ್ಯಾವಳಿಗಳನ್ನು ಆಯೋಜಿಸಲಾಗಿದೆ.

ಹಾಸನ ಮತ್ತು ಚಿಕ್ಕಮಗಳೂರುಗಳಲ್ಲಿ ಅತ್ಯಾಧುನಿಕ ಸಿಂಥೆಟಿಕ್ ಅಥ್ಲೆಟಿಕ್ ಟ್ರ್ಯಾಕ್‌ಗಳನ್ನು ಅಳವಡಿಸಲಾಗುತ್ತಿದ್ದು, ಶಿವಮೊಗ್ಗ, ತುಮಕೂರು ಮತ್ತು ಹುಬ್ಬಳ್ಳಿ-ಧಾರವಾಡಗಳಲ್ಲಿ ಆಧುನಿಕ ಕ್ರೀಡಾ ಸಂಕೀರ್ಣಗಳನ್ನು ನಿರ್ಮಿಸಲಾಗುತ್ತಿದೆ.

...2

ಬೆಂಗಳೂರಿನ ಶ್ರೀ ಕಂಠೀರವ ಕ್ರೀಡಾಂಗಣದಲ್ಲಿ ಅಂತಾರಾಷ್ಟ್ರೀಯ ಮಟ್ಟದ ಸೌಲಭ್ಯಗಳೊಂದಿಗೆ ಕ್ರೀಡಾ ವಿಜ್ಞಾನ ಕೇಂದ್ರವನ್ನು ಹಾಗೂ ಮಂಡ್ಯದಲ್ಲಿ ಕ್ರೀಡಾ ವಿಜ್ಞಾನ ಕೇಂದ್ರವನ್ನು ಆರಂಭಿಸಲಾಗಿದೆ. ಕ್ರೀಡಾ ನ್ಯೂಟ್ರೀಷನ್, ಕ್ರೀಡಾ ಮನೋಶಾಸ್ತ್ರ, ಫಿಸಿಯೋಥೆರಪಿ ಮತ್ತಿತರ ಸೌಲಭ್ಯಗಳನ್ನು ಕ್ರೀಡಾಪಟುಗಳಿಗೆ ಒದಗಿಸಲಾಗುತ್ತಿದ್ದು, ಕ್ರೀಡಾಪಟುಗಳ ಆಯ್ಕೆ, ಕ್ರೀಡಾಪಟುಗಳಿಗೆ ತಮ್ಮ ಸಾಮರ್ಥ್ಯವನ್ನು ವೃದ್ಧಿಸಿಕೊಳ್ಳಲು, ತರಬೇತಿಯಲ್ಲಿ ಗಾಯಗೊಳ್ಳುವ ಸಾಧ್ಯತೆ ಕಡಿಮೆಗೊಳಿಸುವ ಕುರಿತು ಹಾಗೂ ಕ್ರೀಡಾ ಗಾಯದ ಸಮಸ್ಯೆಯ ತುರ್ತು ನಿವಾರಣೆಗೆ ಅಗತ್ಯವಾದ ಸೌಲಭ್ಯಗಳನ್ನು ಕ್ರೀಡಾ ವಿಜ್ಞಾನ ಕೇಂದ್ರದ ಮೂಲಕ ಒದಗಿಸಲಾಗುತ್ತಿದೆ.

ದೇಶದಲ್ಲಿಯೇ ಮೊದಲ ಬಾರಿಗೆ 14 ವರ್ಷ ವಯೋಮಾನದ ಬಾಲಕ:ಬಾಲಕಿಯರಿಗೆ 18 ವಿವಿಧ ಕ್ರೀಡೆಗಳಲ್ಲಿ ಸ್ಪರ್ಧೆಗಳನ್ನೊಳಗೊಂಡ **'ಮಿನಿ ಒಲಿಂಪಿಕ್ಸ್'** ಕ್ರೀಡಾಕೂಟವನ್ನು ಫೆಬ್ರವರಿ-2020 ರಲ್ಲಿ ಆಯೋಜಿಸಲಾಗಿದ್ದು, 3,000 ಕ್ರೀಡಾಪಟುಗಳು ಭಾಗವಹಿಸಿರುತ್ತಾರೆ.

2017, 2018 ಮತ್ತು 2019ನೇ ಸಾಲಿನ ಏಕಲವ್ಯ, ಕರ್ನಾಟಕ ಕ್ರೀಡಾ ರತ್ನ, ಜೀವಮಾನ ಸಾಧನೆ ಮತ್ತು ಕ್ರೀಡಾ ಪೋಷಕ ಪ್ರಶಸ್ತಿಗಳನ್ನು ನವೆಂಬರ್-2020ರಲ್ಲಿ ವಿತರಿಸಲಾಗಿದೆ. ಪ್ರಸ್ತುತ, 2020ನೇ ಸಾಲಿನ ಪ್ರಶಸ್ತಿಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಪಟ್ಟಿ ಅಂತಿಮ ಗೊಳಿಸಲಾಗುತ್ತಿದೆ.

ಕ್ರೀಡಾಪಟುಗಳಿಗೆ ಉತ್ತೇಜನ ನೀಡಲು ವಿವಿಧ ಹಂತದ ಸಾಧನೆಗಳಿಗೆ ಕೆಳಕಾಣಿಸಿದ ನಗದು ಪುರಸ್ಕಾರವನ್ನು ನಿಗಧಿಪಡಿಸಲಾಗಿರುತ್ತದೆ:-

**(ರೂ ಲಕ್ಷಗಳಲ್ಲಿ)**

| **ಕ್ರ. ಸಂ** | **ವಿವರ** | **ಚಿನ್ನ** | **ಬೆಳ್ಳಿ** | **ಕಂಚು** |
|---|---|---|---|---|
| 1 | ಒಲಂಪಿಕ್ಸ್/ಪ್ಯಾರಾಲಿಂಪಿಕ್ಸ್ | 500.00 | 300.00 | 200.00 |
| 2 | ಏಷಿಯನ್ ಗೇಮ್ಸ್ | 25.00 | 15.00 | 8.00 |
| 3 | ಕಾಮನ್ ವೆಲ್ತ್ ಗೇಮ್ಸ್ | 25.00 | 15.00 | 8.00 |
| 4 | ವರ್ಲ್ಡ್ ಕಪ್/ಚಾಂಪಿಯನ್ ಶಿಪ್ (ಭಾರತ ಸರ್ಕಾರದಿಂದ ಅಂಗೀಕೃತವಾಗಿ ಭಾರತ ತಂಡದ ಭಾಗವಾಗಿ ಪ್ರತಿನಿಧಿಸಿರಬೇಕು) | 5.00 | 3.00 | 2.00 |
| 5 | ನ್ಯಾಷನಲ್ ಗೇಮ್ಸ್ (ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ನಡೆಯುವ ಕ್ರೀಡೆಗಳು) | 5.00 | 3.00 | 2.00 |
| 6 | ನ್ಯಾಷನಲ್ ಚಾಂಪಿಯನ್ ಶಿಪ್ (ಒಲಂಪಿಕ್ ಕ್ರೀಡೆಗಳಿಗೆ) | 2.00 | 1.00 | 0.50 |
| 7 | ಜೂನಿಯರ್ ನ್ಯಾಷನಲ್ (ಒಲಂಪಿಕ್ ಕ್ರೀಡೆಗಳಿಗೆ) | 0.50 | 0.25 | 0.15 |
| 8 | ಸಬ್ ಜೂನಿಯರ್ ನ್ಯಾಷನಲ್ (ಒಲಂಪಿಕ್ ಕ್ರೀಡೆಗಳಿಗೆ) | 0.25 | 0.15 | 0.10 |

..3

ಕಳೆದ 04 ವರ್ಷಗಳಲ್ಲಿ ಕ್ರೀಡಾಪಟುಗಳಿಗೆ ವಿವಿಧ ಯೋಜನೆಗಳಡಿ ವಿತರಿಸಲಾದ ನಗದು ಪ್ರೋತ್ಸಾಹಧನಗಳ ವಿವರ ಕೆಳಕಂಡಂತಿದೆ:-

**(ರೂಗಳಲ್ಲಿ)**

| ಕ್ರ ಸಂ | ವರ್ಷ | ಕ್ರೀಡಾಪಟುಗಳ ಸಂಖ್ಯೆ | ವೆಚ್ಚವಾದ ಮೊತ್ತ |
|---|---|---|---|
| **ನಗದು ಪುರಸ್ಕಾರ** | | | |
| 1 | 2018-19 | 686 | 7,81,00,000/- |
| 2 | 2019-20 | 1296 | 14,81,00,000/- |
| 3 | 2020-21 | 956 | 12,88,60,000/- |
| 4 | 2021-22 | 544 | 8,04,55,000/- |
| **ಕ್ರೀಡಾ ವಿದ್ಯಾರ್ಥಿ ವೇತನ** | | | |
| 1 | 2018-19 | 906 | 90,60,000/- |
| 2 | 2019-20 | 524 | 52,40,000/- |
| 3 | 2020-21 | 191 | 19,10,000/- |
| 4 | 2021-22 | 157 | 15,70,000/- |
| **ಶೈಕ್ಷಣಿಕ ಶುಲ್ಕ ಮರುಪಾವತಿ** | | | |
| 1 | 2018-19 | 352 | 1,09,39,995/- |
| 2 | 2019-20 | 298 | 1,35,75,260/- |
| 3 | 2020-21 | 205 | 58,56,418/- |
| 4 | 2021-22 | 212 | 64,18,569/- |

ಕರ್ನಾಟಕದಿಂದ ಟೋಕಿಯೋ ಒಲಿಂಪಿಕ್ಸ್‌ನಲ್ಲಿ ಭಾಗವಹಿಸಿದ 03 ಕ್ರೀಡಾಪಟುಗಳಿಗೆ ತಲಾ ರೂ. 10.00 ಲಕ್ಷ ಹಾಗೂ ಪ್ಯಾರಾಲಿಂಪಿಕ್ಸ್‌ನಲ್ಲಿ ಭಾಗವಹಿಸಿದ ಇಬ್ಬರು ಕ್ರೀಡಾಪಟುಗಳಿಗೆ ತಲಾ ರೂ. 10.00 ಲಕ್ಷ ನಗದು ಪುರಸ್ಕಾರ ನೀಡಿ, ಗೌರವಿಸಲಾಗಿದೆ.

ಕ್ರೀಡಾಪಟುಗಳಿಗೆ ಸಂಬಂಧಿಸಿದ ಎಲ್ಲಾ ನಗದು ಪುರಸ್ಕಾರ ಮೊತ್ತವನ್ನು ಅವರ ಖಾತೆಗೆ ನೇರವಾಗಿ ವರ್ಗಾಯಿಸುವ ಮೂಲಕ ಗರಿಷ್ಟ ಪಾರದರ್ಶಕತೆ ಕಾಯ್ದುಕೊಳ್ಳಲಾಗುತ್ತಿದೆ.

ಭಾರತ ಸ್ವಾತಂತ್ರ್ಯದ ಅಮೃತ ಮಹೋತ್ಸವದ ಸವಿನೆಪಿಗಾಗಿ ಸನ್ಮಾನ್ಯ ಮುಖ್ಯಮಂತ್ರಿಗಳು 15ನೇ ಆಗಸ್ಟ್ 2021ರ ಭಾಷಣದಲ್ಲಿ ಮುಂದಿನ ಪ್ಯಾರೀಸ್ ಒಲಂಪಿಕ್ ಕ್ರೀಡಾಕೂಟದಲ್ಲಿ ಉತ್ತಮ ಸಾಧನೆ ತೋರಿ ಪದಕ ವಿಜೇತರಾಗುವ ಸಾಮರ್ಥ್ಯವುಳ್ಳ 75 ಕ್ರೀಡಾಪಟುಗಳನ್ನು ಗುರುತಿಸಿ ಅವರಿಗೆ ಅಗತ್ಯವಾದ ತರಬೇತಿ ಮತ್ತು ಪ್ರೋತ್ಸಾಹ ನೀಡಲು ಅಮೃತ ಕ್ರೀಡಾ ದತ್ತು ಯೋಜನೆಯನ್ನು ಘೋಷಣೆ ಮಾಡಿರುತ್ತಾರೆ. ಈ ಅಮೃತ ಕ್ರೀಡಾ ದತ್ತು ಯೋಜನೆಯಡಿ ಆಯ್ಕೆಯಾದ ಪ್ರತಿ ಕ್ರೀಡಾಪಟುವಿಗೆ ರೂ.5.00ಲಕ್ಷ ವಾರ್ಷಿಕವಾಗಿ ಕ್ರೀಡಾಭ್ಯಾಸಕ್ಕೆ ಪೂರಕವಾಗಿ ಖರ್ಚು ಮಾಡಲು ಸರ್ಕಾರದ ಆದೇಶ ಸಂಖ್ಯೆ:ವೈಎಸ್‌ಡಿ-ಇಪಿಇ/28/2021(ಭಾಗ-1); ದಿನಾಂಕ:19.08.2021ರಲ್ಲಿ ಯೋಜನೆಯ ರೂಪುರೇಷೆಗಳನ್ನು ನಿಗದಿಪಡಿಸಲಾಗಿದೆ. ಮುಂದುವರೆದು, ಮೊದಲ ಹಂತವಾಗಿ 70 ಕ್ರೀಡಾಪಟುಗಳಿಗೆ ತಲಾ ರೂ.1.20 ಲಕ್ಷದಂತೆ ಒಟ್ಟು ರೂ.84.00 ಲಕ್ಷಗಳನ್ನು ಸದರಿ ಕ್ರೀಡಾಪಟುಗಳ ಬ್ಯಾಂಕ್ ಖಾತೆಗೆ ನೇರವಾಗಿ ಜಮಾ ಮಾಡಲಾಗಿದ್ದು, ಉಳಿದ ಮೊಬಲಗನ್ನು ಮಾನ್ಯತೆ ಪಡೆದ ಪ್ರತಿಷ್ಠಿತ ಅಕಾಡೆಮಿಗಳ ಮೂಲಕ ಕ್ರೀಡಾ ತರಬೇತಿ, ಕ್ರೀಡಾ ವಿಜ್ಞಾನ ಬೆಂಬಲ, ಪೌಷ್ಟಿಕ ಆಹಾರ, ಕ್ರೀಡಾ ಕಿಟ್ ಇತ್ಯಾದಿ ಸಲುವಾಗಿ ಅಕಾಡೆಮಿಗಳಿಗೆ ನೀಡಲಾಗುವುದು.

...4

ಮುಂದುವರೆದು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ಕ್ರೀಡಾಭಿವೃದ್ಧಿಗಾಗಿ ಅನುಷ್ಠಾನಗೊಳಿಸಲಾಗುತ್ತಿರುವ ಕಾರ್ಯಕ್ರಮದ ವಿವರಗಳು ಈ ಕೆಳಗೆ ಕಂಡಂತಿವೆ:-

1. **ಕ್ರೀಡಾಪಟುಗಳಿಗೆ ಪ್ರೋತ್ಸಾಹ:** ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದ ಅಧಿಕೃತ ಕ್ರೀಡಾಕೂಟಗಳಲ್ಲಿ ಕರ್ನಾಟಕವನ್ನು ಪ್ರತಿನಿಧಿಸಿ ಭಾಗವಹಿಸಿ ವಿಜೇತರಾದ ಕ್ರೀಡಾಪಟುಗಳಿಗೆ ನಗದು ಪುರಸ್ಕಾರ, ಶೈಕ್ಷಣಿಕ ಶುಲ್ಕ ಮರುಪಾವತಿ ಹಾಗೂ ಕ್ರೀಡಾ ವಿದ್ಯಾರ್ಥಿ ವೇತನವನ್ನು ನೀಡಲಾಗುತ್ತಿದೆ.
2. ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಕ್ರೀಡಾ ಮೀಸಲಾತಿಯಡಿ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯವನ್ನು ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ವೃತ್ತಿಪರ ಕೋರ್ಸ್ ಗಳಲ್ಲಿ ಪ್ರವೇಶ ನೀಡಲಾಗುತ್ತಿದೆ.
3. ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯವನ್ನು ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಏಕಲವ್ಯ ಪ್ರಶಸ್ತಿ, ಜೀವಮಾನ ಸಾಧನೆ ಪ್ರಶಸ್ತಿ ಹಾಗೂ ಕ್ರೀಡೆಯನ್ನು ಪ್ರೋತ್ಸಾಹಿಸುತ್ತಿರುವ ಸಂಸ್ಥೆಗಳಿಗೆ ಕ್ರೀಡಾ ಪೋಷಕ ಪ್ರಶಸ್ತಿ ನೀಡಲಾಗುತ್ತಿದೆ.
4. ದೇಸೀ ಗ್ರಾಮೀಣ ಕ್ರೀಡೆಗಳಲ್ಲಿ ವಿಶೇಷ ಸಾಧನೆ ಮಾಡಿದ ರಾಜ್ಯದ ಗ್ರಾಮೀಣ ಕ್ರೀಡಾ ಪ್ರತಿಭೆಗಳಿಗೆ ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ.
5. ರಾಜ್ಯ, ರಾಷ್ಟ್ರ ಹಾಗೂ ಅಂತಾರಾಷ್ಟ್ರ ಮಟ್ಟದ ಕ್ರೀಡಾ ಸ್ಪರ್ಧೆಗಳಲ್ಲಿ ಸಾಧನೆಗೈದ, 50 ವರ್ಷಕ್ಕಿಂತ ಹೆಚ್ಚು ವಯೋಮಾನದ ಪ್ರಸ್ತುತ ಸಂಕಷ್ಟ ಪರಿಸ್ಥಿತಿಯಲ್ಲಿರುವ ಮಾಜಿ ಕ್ರೀಡಾಪಟುಗಳಿಗೆ ಇಲಾಖೆಯಿಂದ ಮಾಸಾಶನವನ್ನು ನೀಡಲಾಗುತ್ತಿದೆ.
6. ಕೇಂದ್ರ ಸರ್ಕಾರ ಪುರಸ್ಕೃತ ಅರ್ಜುನ, ಧ್ಯಾನಚಂದ್, ದ್ರೋಣಾಚಾರ್ಯ ಹಾಗೂ ರಾಜೀವ್ ಗಾಂಧಿ ಖೇಲ್ ರತ್ನ ಪ್ರಶಸ್ತಿಗಳಿಗೆ ಇಲಾಖೆಯಿಂದ ರಾಜ್ಯದ ಕ್ರೀಡಾಪಟುಗಳನ್ನು ಶಿಫಾರಸ್ಸು ಮಾಡಲಾಗುತ್ತಿದೆ. ಸದರಿ ಪ್ರಶಸ್ತಿ ಪುರಸ್ಕೃತರಾದ ರಾಜ್ಯದ ಕ್ರೀಡಾಪಟುಗಳಿಗೆ ಉಚಿತ ಬಸ್ ಪಾಸ್ ಸೌಲಭ್ಯವನ್ನು ನೀಡಲಾಗುತ್ತಿದೆ.
7. **ಸಿ.ಎಂ.ದಸರಾ ಕಪ್:** ನಾಡಹಬ್ಬ ದಸರಾ ಅಂಗವಾಗಿ ಇಲಾಖೆಯ ವತಿಯಿಂದ ಪ್ರತಿ ವರ್ಷ ದಸರಾ ಕ್ರೀಡಾಕೂಟವನ್ನು ತಾಲ್ಲೂಕು, ಜಿಲ್ಲಾ, ವಿಭಾಗ ಮತ್ತು ರಾಜ್ಯಮಟ್ಟದವರೆಗೆ ಯಾವುದೇ ವಯೋಮಿತಿ ಇಲ್ಲದೇ ಮುಕ್ತ ಕ್ರೀಡಾಕೂಟವನ್ನು ಆಯೋಜಿಸಲಾಗುತ್ತಿದೆ.
8. **ಕ್ರೀಡಾಶಾಲೆ/ನಿಲಯಗಳು**: ರಾಜ್ಯದಲ್ಲಿ ಒಟ್ಟು 34 ಕ್ರೀಡಾಶಾಲೆ/ನಿಲಯಗಳಿದ್ದು, ಇವುಗಳಿಗೆ ಪ್ರವೇಶ ನೀಡುವ ಸಂಬಂಧ ತಾಲ್ಲೂಕು, ಜಿಲ್ಲಾ, ವಿಭಾಗ ಮತ್ತು ರಾಜ್ಯಮಟ್ಟದಲ್ಲಿ ಆಯ್ಕೆ ಶಿಬಿರಗಳನ್ನು ನಡೆಸಿ ಕ್ರೀಡಾಪಟುಗಳ ದೈಹಿಕ ಕ್ಷಮತೆಯನ್ನು ಪರೀಕ್ಷಿಸಿ ಅರ್ಹ ಕ್ರೀಡಾಪಟುಗಳಿಗೆ ಕ್ರೀಡಾಶಾಲೆ/ನಿಲಯಗಳಿಗೆ ಪ್ರವೇಶ ನೀಡಿ ಉಚಿತವಾಗಿ ವಸತಿ ವ್ಯವಸ್ಥೆ, ಊಟೋಪಹಾರ, ಕ್ರೀಡಾ ತರಬೇತಿ, ಕ್ರೀಡಾಗಂಟು, ವೈದ್ಯಕೀಯ ವೆಚ್ಚ, ಕ್ರೀಡಾಕೂಟಗಳಲ್ಲಿ ಪಾಲ್ಗೊಳ್ಳಲು ಪ್ರಯಾಣ ಭತ್ಯೆ ನೀಡಲಾಗುತ್ತಿದೆ.
9. ಗ್ರಾಮೀಣ ಭಾಗಗಳಲ್ಲಿ ಕ್ರೀಡಾ ಸಂಸ್ಕೃತಿಯನ್ನು ಬೆಳೆಸಲು ಯುವ/ಕ್ರೀಡಾ ಸಂಘಗಳಿಗೆ ಯುವಚೈತನ್ಯ ಮತ್ತು ಯುವ ಕ್ರೀಡಾಮಿತ್ರ ಕಾರ್ಯಕ್ರಮದಡಿ ಕ್ರೀಡಾ ಸಲಕರಣೆ ನೀಡಲಾಗುತ್ತಿದೆ.
10. ಮಾನ್ಯತೆ ಪಡೆದ ರಾಜ್ಯ ಕ್ರೀಡಾ ಸಂಸ್ಥೆಗಳಿಗೆ ಕ್ರೀಡಾಕೂಟಗಳ ಆಯೋಜನೆಗೆ, ತರಬೇತಿ ಶಿಬಿರಗಳ ಆಯೋಜನೆ ಹಾಗೂ ಕ್ರೀಡಾಕೂಟಗಳಿಗೆ ರಾಜ್ಯ ತಂಡದ ನಿಯೋಜನೆಗೆ ಅನುದಾನ ನೀಡಲಾಗುತ್ತಿದೆ.
11. ಜನರಲ್ ತಿಮ್ಮಯ್ಯ ರಾಷ್ಟ್ರೀಯ ಸಾಹಸ ಅಕಾಡೆಮಿಯ ವತಿಯಿಂದ ಭೂ-ಸಾಹಸ, ಜಲಸಾಹಸ, ಹಾಗೂ ವಾಯು ಸಾಹಸ ಕಾರ್ಯಕ್ರಮಗಳನ್ನು ಸಂಘಟಿಸಲಾಗುತ್ತಿದೆ.

...5

12. ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆ ಅಡಿಯಲ್ಲಿ ಪರಿಶಿಷ್ಟ ಜಾತಿ/ ಪಂಗಡದ ಯುವಜನರಿಗೆ/ಕ್ರೀಡಾಪಟುಗಳಿಗೆ ಪ್ರೋತ್ಸಾಹಧನ, ಕ್ರೀಡಾ ವಿಜ್ಞಾನ ಸೇವೆಯನ್ನು ಪಡೆದ ಕ್ರೀಡಾಪಟುಗಳಿಗೆ ಮರು ಪಾವತಿ ಸೌಲಭ್ಯ, ಜಿಮ್ ಸ್ಥಾಪನೆಗಾಗಿ ಸಹಾಯಧನ ನೀಡಲಾಗುತ್ತಿದೆ.
13. **ಕ್ರೀಡಾ ಮೂಲಭೂತ ಸೌಕರ್ಯಗಳು:** ಪ್ರಸ್ತುತ ರಾಜ್ಯಾದ್ಯಂತಹ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ 29 ಜಿಲ್ಲಾ ಕ್ರೀಡಾಂಗಣಗಳು ಮತ್ತು 120 ತಾಲ್ಲೂಕು ಕ್ರೀಡಾಂಗಣಗಳನ್ನು ನಿರ್ಮಿಸಲಾಗಿದೆ. ಸದರಿ ಕ್ರೀಡಾಂಗಣಗಳ ಪೈಕಿ 15 ಸಿಂಥೆಟಿಕ್ ಅಥ್ಲೆಟಿಕ್ ಟ್ರ್ಯಾಕ್, ಬೆಂಗಳೂರು ನಗರದ ಅಕ್ಕಿತಿಮ್ಮನಹಳ್ಳಿ ಹಾಕಿ ಕ್ರೀಡಾಂಗಣ, ಕೊಡಗು ಜಿಲ್ಲೆಯ ಪೊನ್ನಂಪೇಟೆ ಮತ್ತು ಕೂಡಿಗೆ, ಮೈಸೂರು ಜಿಲ್ಲಾ ಕ್ರೀಡಾಂಗಣದಲ್ಲಿ ಹಾಕಿ ಟರ್ಫ್ ಅಳವಡಿಸಲಾಗಿದೆ. ಅಲ್ಲದೇ 47 ಒಳಾಂಗಣ ಕ್ರೀಡಾಂಗಣ ಮತ್ತು 31 ಈಜುಕೊಳಗಳನ್ನು ನಿರ್ಮಿಸಲಾಗಿದೆ.
14. ಬೆಂಗಳೂರು ನಗರದ ಶ್ರೀ ಕಂಠೀರವ ಕ್ರೀಡಾಂಗಣದಲ್ಲಿ ಅಂತಾರಾಷ್ಟ್ರೀಯ ಕ್ರೀಡಾಕೂಟಗಳನ್ನು ಹಮ್ಮಿಕೊಳ್ಳಲು ಅವಶ್ಯವಿರುವ ಎಲ್ಲಾ ಮೂಲ ಸೌಕರ್ಯಗಳನ್ನು ಕಲ್ಪಿಸಲಾಗಿದೆ. ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಕ್ರೀಡಾಂಗಣಗಳಲ್ಲಿ 400ಮೀ./200ಮೀ ಅಥ್ಲೆಟಿಕ್ ಮಣ್ಣಿನ ಅಂಕಣ, ಕಬಡ್ಡಿ, ಖೋ-ಖೋ, ವಾಲಿಬಾಲ್, ಬ್ಯಾಡ್ಮಿಂಟನ್, ಬಾಸ್ಕೆಟ್ ಬಾಲ್ ಮುಂತಾದ ಕ್ರೀಡಾ ಅಂಕಣಗಳನ್ನು ಸೃಜಿಸಿ, ಅವಶ್ಯವಿರುವ ಕ್ರೀಡಾ ಸಾಧನಗಳನ್ನು ಒದಗಿಸಲಾಗುತ್ತಿದೆ.

ಈ ಮೇಲೆ ವಿವರಿಸಲಾದಂತೆ, ರಾಜ್ಯದ ಕ್ರೀಡಾ ಕ್ಷೇತ್ರ ಸರ್ವತೋಮುಖ ಬೆಳವಣಿಗೆಗೆ ಲಭ್ಯ ಅನುದಾನದಲ್ಲಿ ಹೆಚ್ಚಿನ ಉತ್ತೇಜನವನ್ನು ನೀಡಲಾಗುತ್ತಿದೆ.

**ವೈಎಸ್‌ಡಿ/ಇಬಿಬಿ/44/2022**

**(ಡಾ|| ನಾರಾಯಣಗೌಡ)**
ರೇಷ್ಮೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.